ಓ ಎಸ್ ನಂಬ್ರ: 832 /2022 ಪಿಡಬ್ಲ್ಯೂ: 1

ದಿ: 10-11-2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ವಾದಿ** ಪರ ವಕೀಲರಾದ ಶ್ರೀ ಹೆಚ್ ಆರ್ ಎಸ್ ರವರಿಂದ:

ನನ್ನ ಸಹಿ ಮಾಡಿದ ಸಾಕ್ಷಿ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳೆಲ್ಲಾ ಸತ್ಯವಾಗಿದೆ. ನನ್ನ ಮಗನ ಹೆಸರು ಜನನ ಪ್ರಮಾಣ ಪತ್ರದಲ್ಲಿ ತಪ್ಪಾಗಿ ನಮೂದಾಗಿರುವ ಜನನ ಪ್ರಮಾಣಪತ್ರವನ್ನು ನಿಪಿ-1 ಎಂದು ಗುರುತಿಸಲಾಯಿತು. ಒಂದನೆ ಪ್ರತಿವಾದಿಯವರು ಜನನ ಪ್ರಮಾಣ ಪತ್ರದಲ್ಲಿ ತಿದ್ದುಪಡಿಯನ್ನು ಮಾಡಲು ಬರುವುದಿಲ್ಲ ಎಂದು ನೀಡಿರುವ ಹಿಂಬರಹವನ್ನು ನಿಪಿ2 ಎಂದು ಗುರುತಿಸಲಾಯಿತು. ವಕೀಲರ ನೋಟಿಸು ದಿ: 14-06-2022 ನ್ನು ನಿಪಿ3 ಎಂದು ಗುರುತಿಸಲಾಯಿತು. ಎರಡು ಅಂಚೆ ರಶೀದಿಯನ್ನು ನಿಪಿ4 ಮತ್ತು ನಿಪಿ5 ಎಂದು ಗುರುತಿಸಲಾಯಿತು. ಎರಡು ಅಂಚೆ ಸ್ವೀಕೃತಿಯನ್ನು ನಿಪಿ6 ಮತ್ತು ನಿಪಿ7 ಎಂದು ಗುರುತಿಸಲಾಯಿತು. ನನ್ನ ಆಧಾರ್ ಕಾರ್ಡಿನ ನಕಲು ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಆದ್ದರಿಂದ ಅರ್ಜಿಯಲ್ಲಿ ಕೋರಿದಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟಿ ಸವಾಲು: ಪ್ರತಿವಾದಿ ಪರ ವಕೀಲರಾದ ಎ ಡಿ ಜಿ ಪಿಯವರಿಂದ:**

ಸದರಿ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಲು ನಾನು ಮಾಹಿತಿ ಕೊಟ್ಟಿರುತ್ತೇನೆ. ನನ್ನ ಮಗ ಟಿ ಎಂ ಎ ಪೈ ಆಸ್ಪತ್ರೆಯಲ್ಲಿ ಜನಿಸಿರುತ್ತಾನೆ. ಸದರಿ ಆಸ್ಪತ್ರೆಯವರಿಗೆ ನಾನು ನನ್ನ ಮಗುವಿನ ಹೆಸರು, ಪೋಷಕರ ಹೆಸರು ಮತ್ತು ವಿಳಾಸವನ್ನು ಸರಿಯಾಗಿ ಮಾಹಿತಿ ಕೊಟ್ಟಿರುತ್ತೇನೆ. ನಾನು ಮಾಹಿತಿ ಕೊಟ್ಟಂತೆ ಜನನ ಪ್ರಮಾಣ ಪತ್ರದಲ್ಲಿ ನನ್ನ ಮಗನ ಹೆಸರು ನಮೂದಾಗಿರುತ್ತದೆ ಎಂದರೆ ನಾನು ಸರಿಯಾಗಿ ಕೊಟ್ಟಿರುತ್ತೇನೆ ಆದರೆ ಒಂದನೆ ಪ್ರತಿವಾದಿಯವರು ಮಗನ ಹೆಸರನ್ನು ತಪ್ಪಾಗಿ ನಮೂದಿಸಿರುತ್ತಾರೆ. ಸದರಿ ಜನನ ಪ್ರಮಾಣ ಪತ್ರದಲ್ಲಿರುವ ತಪ್ಪಿಗೆ ಪ್ರತಿವಾದಿಯವರು ಕಾರಣರಲ್ಲ ಎಂದರೆ ಸರಿಯಲ್ಲ. ನಾನು ದಾವೆಯಲ್ಲಿ ಕೋರಿದಂತೆ ಆದೇಶ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು. )

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ. ಎಫ್. ಸಿ., ಉಡುಪಿ.